ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1213 (1228)
ಮಾನ್ಯ ಸದಸ್ಯರ ಹೆಸರು	:	ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	17.03.2021
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿ ಎಷ್ಟು ನಿಗಮ / ಮಂಡಳಿಗಳು ಕಾರ್ಯ ನಿರ್ವಹಿಸುತ್ತಿವೆ; ಸದರಿ ನಿಗಮ / ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)	ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿ ಎರಡು ನಿಗಮಗಳು ಇದ್ದು, ಅವು 1) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ ಹಾಗೂ 2) ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತ. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 1) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಮಂಜೂರಾಗಿರುವ ವಿವಿಧ ವರ್ಗದ ಒಟ್ಟು ಹುದ್ದೆಗಳ ಸಂಖ್ಯೆ 87 (ವೃಂದವಾರು ವಿವರವನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ). 2) ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ 85 (ವೃಂದವಾರು ವಿವರವನ್ನು ಅನುಬಂಧ-2 ರಲ್ಲಿ ಲಗತ್ತಿಸಲಾಗಿದೆ).
ಆ)	ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;	1) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತವು ನಿಗಮದಲ್ಲಿ ಅನುಮೋದನೆಗೊಂಡಿರುವ ಹುದ್ದೆಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ವಿವರ: 1) ಗ್ರೂಪ್ 'ಎ' – 36 ನಿಯೋಜನೆ ಮೇರೆಗೆ. 2) ಗ್ರೂಪ್ 'ಬಿ' – 15 ನಿಯೋಜನೆ ಮೇರೆಗೆ. 3) ಗ್ರೂಪ್ 'ಸಿ' – 03 ನಿಯೋಜನೆ ಮೇರೆಗೆ. 4) ಗ್ರೂಪ್ 'ಬಿ' – 04 ಗುತ್ತಿಗೆ ಮೇರೆಗೆ. 5) ಗ್ರೂಪ್ 'ಸಿ' – 13 ಗುತ್ತಿಗೆ ಮೇರೆಗೆ. 6) ಗ್ರೂಪ್ 'ಡಿ' – 10 ಗುತ್ತಿಗೆ ಮೇರೆಗೆ. 2) ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ 85.

ಕ್ರ.ಸಂ.	ಪ್ರಶ್ನೆ	ಉತ್ತರ
ಇ)	ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)	1) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ : 'ಎ' ವೃಂದ –01 ಹುದ್ದೆ 'ಐ' ವೃಂದ –05 ಹುದ್ದೆಗಳು 2) ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತದಲ್ಲಿ ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡಿರುವುದಿಲ್ಲ.
ಈ)	ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು	ಹೌದು, 1) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಖಾಲಿ ಇರುವ ಹುದ್ದೆಗಳನ್ನು ನಿಯೋಜನೆ ಮೇರೆಗೆ ಪಡೆಯಲು ಅನುಮೋದನೆಗೊಂಡಿದ್ದು ಅದರಂತೆ ಭರ್ತಿ ಮಾಡಲು ಕ್ರಮ ವಹಿಸಿದೆ. 2) ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತವನ್ನು ಮುಚ್ಚಲು ಸರ್ಕಾರದ ಆದೇಶ ಸಂ. ಡಿಡಿಪಿಇಆರ್ 84 ಎಆರ್‌ಯು 2002, ದಿ. 09.12.2003 ರಲ್ಲಿ ಆದೇಶಿಸಲಾಗಿರುವುದರಿಂದ ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡಿರುವುದಿಲ್ಲ.
ಉ)	ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?	1) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಖಾಲಿ ಇರುವ ಹುದ್ದೆಗಳನ್ನು ನಿಯೋಜನೆ ಮೇರೆಗೆ ಪಡೆಯಲು ಅನುಮೋದನೆಗೊಂಡಿದ್ದು, ನೇಮಕಾತಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. 2) ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತವನ್ನು ಮುಚ್ಚಲು ಸರ್ಕಾರದ ಆದೇಶ ಸಂ. ಡಿಡಿಪಿಇಆರ್ 84 ಎಆರ್‌ಯು 2002, ದಿ. 09.12.2003 ರಲ್ಲಿ ಆದೇಶಿಸಲಾಗಿರುವುದರಿಂದ ಯಾವುದೇ ಹುದ್ದೆಗಳಿಗೆ ನೇಮಕಾತಿ ಮಾಡಿರುವುದಿಲ್ಲ.

ಸಂಖ್ಯೆ: ಲೋಇ 35 ಸೇಇಸಿ 2021

(ಗೋವಿಂದ ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ